ಮೈಸೂರು ವಿಶ್ವವಿದ್ಯಾಲಯದಲ್ಲಿ ಅಂಚೆ ಮತ್ತು ತೆರಪಿನ ಶಿಕ್ಷಣ

1007 - ಶ್ರೀ ಮಂಜು ಎ. (ಅರಕಲಗೂಡು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೈಸೂರು ವಿಶ್ವವಿದ್ಯಾಲಯವು ನಡೆಸುತ್ತಿರುವ ಅಂಚೆ ತೆರಪಿನ ಶಿಕ್ಷಣದಡಿಯಲ್ಲಿ (ವಯೋಮಿತಿ ಆಧಾರದ ಮೇಲೆ) ಎಂ.ಎ. ಪದವಿ ಪಡೆದ ಸರ್ಕಾರಿ ನೌಕರರಿಗೆ ಬಡ್ತಿ ನಿರಾಕರಿಸುತ್ತಿರುವುದು ನಿಜವೇ?*

ಆ) *ಹಾಗಿದ್ದಲ್ಲಿ ಬಡ್ತಿ ಅವಕಾಶ ನಿರಾಕರಿಸಲು ಕಾರಣಗಳೇನು?*

ಇ) *ಬಡ್ತಿ ಅವಕಾಶ ಕಲ್ಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು

1010 - ಶ್ರೀ ನಂಜಯ್ಯನ ಮಠ ಎಸ್.ಜಿ. (ಗುಳೇದಗುಡ್ಡ) : ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಂಖ್ಯೆ ಎಷ್ಟು?*

ಆ) *ಅವುಗಳಲ್ಲಿ ಅನುದಾನಕ್ಕೆ ಒಳಪಟ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳು ಎಷ್ಟು?*

ಇ) *ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಐದನೇ ವೇತನ ಆಯೋಗದ ಸೌಲಭ್ಯಗಳನ್ನು ನೀಡಲಾಗಿದೆಯೇ? ಸೌಲಭ್ಯ ಒದಗಿಸದೇ ಇದ್ದಲ್ಲಿ ಎಂದಿನಿಂದ ಒದಗಿಸಲಾಗುವುದು?*

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :

ಅ) 324.

ಆ) 112.

ಇ) 1. ಇಲ್ಲ.

2. ಪರಿಶೀಲನೆಯಲ್ಲಿದೆ.